

# ‘ಆರ್ದ್ರತೆಯಿಲ್ಲದೆ ದೊಡ್ಡ ಸಾಹಿತ್ಯ ಹುಟ್ಟಲ್ಲ

ಲೇಖಿಕೆ ಕಸ್ತೂರಿ ಬಾಯರಿಯವರು (1956–2022) ಈಚೆಗೆ ನಿಧನರಾದರು. ಅವರು ಕರಾವಳಿಯಿಂದ ಬದಾಮಿಗೆ ವಲಸೆ ಮಾಡಿದ ತಮ್ಮ ಕುಟುಂಬ ಜತೆ ಬಾಲ್ಯದಲ್ಲೇ ಬಂದವರು. ವೃತ್ತಿಯಿಂದ ಆಂಗ್ಲ ಶಿಕ್ಷಕಿಯಾಗಿದ್ದ ಅವರು, ಬಾಳಿನ ಕೊನೆಯ ವರ್ಷಗಳಲ್ಲಿ ಬರಹ ಆರಂಭಿಸಿದರು. ಕವಿತೆ, ಕತೆ, ಪತ್ರ, ಪ್ರಬಂಧ ಮತ್ತು ಅನುವಾದ ಪ್ರಕಾರಗಳಲ್ಲಿ ಕೃತಿ ಪ್ರಕಟಿಸಿದರು. ಅವರ ಸಾಹಿತ್ಯವು, ಬಾಲ್ಯದ ಬಡತನ, ವೃತ್ತಿಜೀವನದ ಅಭದ್ರತೆ ಹಾಗೂ ದೈಹಿಕ ಬೇನೆಗಳಿಂದ ಗಾಯಗೊಂಡ ವ್ಯಕ್ತಿತ್ವವೊಂದು, ಬದುಕಿಗೆ ಅರ್ಥ ಕಂಡುಕೊಳ್ಳಲು ಮಾಡಿದ ಪ್ರಯತ್ನದಂತಿದೆ. ಭಾವುಕ ತೀವ್ರತೆಯಿಂದ ಪ್ರವಹಿಸುವ ಭಾಷೆ ಮತ್ತು ಶೈಲಿ ಅದರ ಲಕ್ಷಣ. ಅಲ್ಲಿ ಭಗ್ನಹೃದಯದ ಸ್ತ್ರೀಪಾತ್ರಗಳು ಸಾಮಾನ್ಯವಾಗಿದ್ದು, ಅವು ಬಾಳ ಬಿಕ್ಕಟ್ಟುಗಳಲ್ಲಿ ಹಾಯುತ್ತ, ನೆಮ್ಮದಿ ಅರಸುತ್ತ, ತಮ್ಮತನ ಕಂಡುಕೊಳ್ಳಲು ಸೆಣಸಾಡುವ ಸನ್ನಿವೇಶಗಳಿವೆ. ಧರ್ಮ–ಜಾತಿ–ಭಾಷೆಯ ಸರಹದ್ದುಗಳಾಚೆ ಸಮಸ್ತ ಮನುಷ್ಯರಲ್ಲಿ ನೆಲೆಸಿರುವ ಪ್ರೀತಿ ಮತ್ತು ಮನುಷ್ಯತ್ವವನ್ನು ದರ್ಶನದಂತೆ ಅರಸುವುದು ಅವರ ಸಾಹಿತ್ಯದ ಆಶಯ.

ಕಸ್ತೂರಿಯವರು ಕರಾವಳಿ ಹಾಗೂ ಬಿಜಾಪುರ ಸೀಮೆಯ ಜನಜೀವನದ ವಿವಿಧ ಮುಖಗಳನ್ನು ತಮ್ಮ ಬರೆಹದಲ್ಲಿ ಶೋಧಿಸಿದವರು. ಅವರ ಕತೆಗಳು ಎರಡು ವಿಭಿನ್ನ ಪ್ರಾದೇಶಿಕ ಸೀಮೆಗಳ ಅನುಭವವನ್ನು ಹಾಸುಹೊಕ್ಕಿನ ಎಳೆಗಳನ್ನಾಗಿ ಮಾಡಿ ನೇದ ಪತ್ತಲದಂತಿವೆ. ‘ದಿಂಡಿ’ ಕತೆಯಲ್ಲಿರುವ ಪ್ರಾದೇಶಿಕತೆಯು, ಇದು ಕರಾವಳಿ ಮೂಲದವರು ಬರೆದಿದ್ದೇ ಎಂದು ವಿಸ್ಮಯ ಹುಟ್ಟಿಸುವಷ್ಟು ದಟ್ಟವೂ ಜೀವಂತವೂ ಆಗಿದೆ. ಅವರು ಸೋದರಿ ರೋಹಿಣಿಯವರ ಜತೆ ಬದಾಮಿಯಲ್ಲಿ ವಾಸವಾಗಿದ್ದರು. ಇಬ್ಬರೂ ಸಾಹಿತ್ಯದ ಗಾಢ ಓದುಗರು; ತಾವು ಓದಿದ ಒಳ್ಳೆಯ ಪುಸ್ತಕಗಳನ್ನು ತರಿಸಿಕೊಂಡು ಬಂದವರಿಗೆಲ್ಲ ಹಂಚುತ್ತಿದ್ದವರು. ನಾನು ಬಾನು ಜತೆ, ನನ್ನ ವಿದ್ಯಾರ್ಥಿಗಳ ಜತೆ, ತಮ್ಮ ಕಲೀಮನ ಜತೆ ಬದಾಮಿಯತ್ತ ಹೋದಾಗಲೆಲ್ಲ ಅವರನ್ನು ಕಾಣುತ್ತಿದ್ದೆ. ಕೋವಿಡ್ ಕಾರಣದಿಂದ ಕಳೆದೆರಡು ವರ್ಷಗಳಿಂದ ಹೋಗಿರಲಿಲ್ಲ. ಅವರು ಡಯಾಬಿಟೀಸಿನ ದೆಸೆಯಿಂದ ದೃಷ್ಟಿ ಕಳಕೊಂಡು ತಮಗೆ ಓದು ಸಾಧ್ಯವಾಗುತ್ತಿಲ್ಲ

